## ಕರ್ನಾಟಕ ಸರ್ಕಾರದ ನಡವಳಿಗಳು

ವಿಷಯ: ಶಾಲಾ ಶಿಕ್ಷಣ ಮತ್ತು ಸಾಕ್ಷರತಾ ಇಲಾಖೆಯ ಅಡಿಯಲ್ಲಿ ಬರುವ ಸಾರ್ವಜನಿಕ ಶಿಕ್ಷಣ ಇಲಾಖೆಯ ಅಧೀನದಲ್ಲಿರುವ ಎಲ್ಲಾ ಕಛೇರಿಗಳು ಹಾಗೂ ಶಾಲೆಗಳ ಹಂತದಲ್ಲಿ ಪದನಾಮವನ್ನು ಬದಲಾಯಿಸುವ ಬಗ್ಗೆ.

ಓದಲಾಗಿದೆ:
1. ಆದೇಶ ಸಂಖ್ಯೆ: ಇಪಿ 329 ಪಿಜಿಸಿ 2021, ದಿನಾಂಕ 24/06/2022.
2. ಅಧಿಸೂಚನೆ ಸಂಖ್ಯೆ ಸಿಆಸುಇ 15 ಎಆರ್‌ಬಿ 2022, ದಿನಾಂಕ:07/02/2023.

*****

ಪ್ರಸ್ತಾವನೆ:

ಮೇಲೆ ಓದಲಾದ ಕ್ರಮ ಸಂಖ್ಯೆ (1)ರಲ್ಲಿ ಕರ್ನಾಟಕ ಸರ್ಕಾರದ ಸಚಿವಾಲಯದಲ್ಲಿ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಇಲಾಖೆಯನ್ನು ಶಾಲಾ ಶಿಕ್ಷಣ ಮತ್ತು ಸಾಕ್ಷರತಾ ಇಲಾಖೆ (Department of School Education and Literacy) ಎಂದು ಮರುಪದನಾಮೀಕರಣಗೊಳಿಸಿ ಆದೇಶಿಸಲಾಗಿರುತ್ತದೆ.

ಮೇಲೆ ಓದಲಾದ ಕ್ರಮ ಸಂಖ್ಯೆ (2)ರಲ್ಲಿ ಕರ್ನಾಟಕ ಸರ್ಕಾರದ (ಕೆಲಸಗಳ ಹಂಚಿಕೆ) ನಿಯಮಗಳು 1977ರ ಅನುಸೂಚಿ – V ರಲ್ಲಿದ್ದ ಶಿಕ್ಷಣ ಇಲಾಖೆ ಎಂಬ ಶೀರ್ಷಿಕೆಗೆ "ಶಾಲಾ ಶಿಕ್ಷಣ ಮತ್ತು ಸಾಕ್ಷರತಾ ಇಲಾಖೆ" ಎಂಬ ಶೀರ್ಷಿಕೆ ನೀಡಿ ತಿದ್ದುಪಡಿ ಮಾಡಲಾಗಿದೆ.

ಅದರಂತೆ, ಸಾರ್ವಜನಿಕ ಶಿಕ್ಷಣ ಇಲಾಖೆಯ ಆಯುಕ್ತರು ಹಾಗೂ ಅದರ ಅಧೀನದಲ್ಲಿ ಬರುವ ಎಲ್ಲಾ ಕ್ಷೇತ್ರ ಕಛೇರಿಗಳು ಹಾಗೂ ರಾಜ್ಯದ ಎಲ್ಲಾ ಜಿಲ್ಲಾ, ಕ್ಲಸ್ಟರ್ ಶಾಲೆಗಳು ಮತ್ತು ಕಛೇರಿಗಳ ನಾಮಫಲಕಗಳನ್ನು "ಶಾಲಾ ಶಿಕ್ಷಣ ಮತ್ತು ಸಾಕ್ಷರತಾ ಇಲಾಖೆ" ಎಂಬ ನೂತನ ಪದನಾಮಕ್ಕೆ ಸರಿಹೊಂದುವಂತೆ ಬದಲಾಯಿಸಲು ಸರ್ಕಾರವು ನಿರ್ಣಯಿಸಿ, ಈ ಕೆಳಕಂಡಂತೆ ಆದೇಶಿಸಿದೆ.

### ಸರ್ಕಾರದ ಆದೇಶ ಸಂಖ್ಯೆ : ಇಪಿ 329 ಪಿಜಿಸಿ 2021, ಬೆಂಗಳೂರು, ದಿನಾಂಕ:20/03/2023

ಪ್ರಸ್ತಾವನೆಯಲ್ಲಿ ವಿವರಿಸಿರುವ ಅಂಶಗಳ ಹಿನ್ನೆಲೆಯಲ್ಲಿ, ಸಾರ್ವಜನಿಕ ಶಿಕ್ಷಣ ಇಲಾಖೆಯ ಆಯುಕ್ತರು ಹಾಗೂ ಅದರ ಅಧೀನದಲ್ಲಿ ಬರುವ ಎಲ್ಲಾ ಕ್ಷೇತ್ರ ಕಛೇರಿಗಳು ಹಾಗೂ ರಾಜ್ಯದ ಎಲ್ಲಾ ಜಿಲ್ಲಾ, ಕ್ಲಸ್ಟರ್ ಶಾಲೆಗಳು ಮತ್ತು ಕಛೇರಿಗಳ ನಾಮಫಲಕಗಳನ್ನು ತಕ್ಷಣದಿಂದ ಜಾರಿಗೆ ಬರುವಂತೆ ಈ ಕೆಳಕಂಡಂತೆ ಮರು ಪದನಾಮೀಕರಣಗೊಳಿಸಿ, ಆದೇಶಿಸಿದೆ.

1. 'ಸಾರ್ವಜನಿಕ ಶಿಕ್ಷಣ ಇಲಾಖೆ' ಎಂದು ಈವರೆಗೆ ಕರೆಯಲ್ಪಡುವ ಇಲಾಖೆಯನ್ನು 'ಶಾಲಾ ಶಿಕ್ಷಣ ಇಲಾಖೆ' ಎಂದು ಪದನಾಮೀಕರಿಸಿದೆ.
2. ಆಯುಕ್ತರು, ಸಾರ್ವಜನಿಕ ಶಿಕ್ಷಣ ಇಲಾಖೆ ಹುದ್ದೆಯನ್ನು, ಆಯುಕ್ತರು, ಶಾಲಾ ಶಿಕ್ಷಣ ಇಲಾಖೆ ಎಂದು ಪದನಾಮೀಕರಿಸಿದೆ. ಇದೇ ರೀತಿ ಇಲಾಖೆಯ ಅಪರ ಆಯುಕ್ತಾಲಯ, ಕಲಬುರಗಿ ಮತ್ತು ಧಾರವಾಡ, ಇಲಾಖೆಯ ಎಲ್ಲಾ ನಿರ್ದೇಶನಾಲಯಗಳು ಹಾಗೂ ಅವುಗಳಡಿ ಬರುವ ಎಲ್ಲಾ ಜಿಲ್ಲಾ ಮತ್ತು ತಾಲ್ಲೂಕು / ಬ್ಲಾಕ್ ಕಛೇರಿಗಳು, ವಿಭಾಗ ಹಂತದ ಕಛೇರಿಗಳು, ಜಿಲ್ಲಾ ಹಂತದ ಉಪನಿರ್ದೇಶಕರು (ಆಡಳಿತ) ಹಾಗೂ ಡಯಟ್ ಪ್ರಾಂಶುಪಾಲರ ಕಛೇರಿ, ಬ್ಲಾಕ್ ಹಂತದ ಕ್ಷೇತ್ರ

ಶಿಕ್ಷಣಾಧಿಕಾರಿ ಹಾಗೂ ಕ್ಷೇತ್ರ ಸಂಪನ್ಮೂಲ ಸಮನ್ವಯಾಧಿಕಾರಿಗಳ ಕಛೇರಿ ಹಾಗೂ ಕ್ಲಸ್ಟರ್ ಹಂತದ ಕಛೇರಿಗಳಲ್ಲಿ 'ಶಾಲಾ ಶಿಕ್ಷಣ' ಎಂದು ಪದನಾಮೀಕರಿಸಿದೆ.

3. ರಾಜ್ಯ ಯೋಜನಾ ನಿರ್ದೇಶಕರು, ಸಮಗ್ರ ಶಿಕ್ಷಣ ಕರ್ನಾಟಕ ಹುದ್ದೆಯನ್ನು ರಾಜ್ಯ ಯೋಜನಾ ನಿರ್ದೇಶಕರು, ಶಾಲಾ ಶಿಕ್ಷಣ ಇಲಾಖೆ ಎಂದು ಪದನಾಮೀಕರಿಸಿದೆ ಹಾಗೂ ರಾಜ್ಯ ಯೋಜನಾ ನಿರ್ದೇಶಕರ ಕಛೇರಿ ಹಾಗೂ ಅದರಡಿ ಬರುವ ಎಲ್ಲಾ ಕಛೇರಿಗಳಲ್ಲಿ 'ಶಾಲಾ ಶಿಕ್ಷಣ ಇಲಾಖೆ' ಎಂದು ಪದನಾಮೀಕರಿಸಿದೆ.
4. ಎಲ್ಲಾ ಪ್ರಾಥಮಿಕ ಮತ್ತು ಪ್ರೌಢಶಾಲೆಗಳಲ್ಲಿ 'ಶಾಲಾ ಶಿಕ್ಷಣ' ಎಂದು ಪದನಾಮೀಕರಿಸಿದೆ.
5. 'ಶಾಲಾ ಶಿಕ್ಷಣ ಇಲಾಖೆ' ಎಂದು ನೂತನವಾಗಿ ಪದನಾಮೀಕರಿಸಿದ ಪದನಾಮವನ್ನು ಸಂಬಂಧಿಸಿದ ಎಲ್ಲಾ ಕಛೇರಿ, ಶಾಲೆಗಳ ಎಲ್ಲಾ ನಾಮಫಲಕಗಳಲ್ಲಿ (ಬೋರ್ಡ್) ಬರೆಸಲು ಕ್ರಮಕೈಗೊಳ್ಳುವುದು.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ
ಮತ್ತು ಅವರ ಹೆಸರಿನಲ್ಲಿ

Hosamath 20/3/2023

**(ಮಹಾಂತಯ್ಯ ಎಸ್ ಹೊಸಮಠ)**
ಸರ್ಕಾರದ ಅಧೀನ ಕಾರ್ಯದರ್ಶಿ
ಶಾಲಾ ಶಿಕ್ಷಣ ಮತ್ತು ಸಾಕ್ಷರತಾ ಇಲಾಖೆ
(ಪ್ರಾಥಮಿಕ)

**ಇವರಿಗೆ:**

ಸಂಕಲನಕಾರರು, ಕರ್ನಾಟಕ ರಾಜ್ಯಪತ್ರ, ಬೆಂಗಳೂರು, ಕರ್ನಾಟಕ ರಾಜ್ಯ ಪತ್ರದಲ್ಲಿ ಪ್ರಕಟಿಸಲು ಮತ್ತು ಇದರ 500 ಪ್ರತಿಗಳನ್ನು ಸರ್ಕಾರದ ಪ್ರಧಾನ ಕಾರ್ಯದರ್ಶಿ, ಶಾಲಾ ಶಿಕ್ಷಣ ಮತ್ತು ಸಾಕ್ಷರತಾ ಇಲಾಖೆ, 6ನೇ ಮಹಡಿ, ಬಹುಮಹಡಿ ಕಟ್ಟಡ, ಬೆಂಗಳೂರು – 560001 ಇವರಿಗೆ ಸಲ್ಲಿಸಲು ಕೋರಿದೆ.

**ಪ್ರತಿಗಳು :**

1. ಸರ್ಕಾರದ ಮುಖ್ಯ ಕಾರ್ಯದರ್ಶಿಯವರ ಆಪ್ತ ಕಾರ್ಯದರ್ಶಿ, ವಿಧಾನಸೌಧ.
2. ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿ ರವರ ಆಪ್ತ ಕಾರ್ಯದರ್ಶಿ, ವಿಧಾನಸೌಧ.
3. ಸರ್ಕಾರದ ಎಲ್ಲಾ ಇಲಾಖೆಗಳ ಅಪರ ಮುಖ್ಯ ಕಾರ್ಯದರ್ಶಿಗಳು/ಪ್ರಧಾನ ಕಾರ್ಯದರ್ಶಿಗಳು/ ಕಾರ್ಯದರ್ಶಿಗಳು.
4. ಎಲ್ಲಾ ಇಲಾಖಾ ಮುಖ್ಯಸ್ಥರು.
5. ಆಯುಕ್ತರು, ಸಾರ್ವಜನಿಕ ಶಿಕ್ಷಣ ಇಲಾಖೆ, ನೃಪತುಂಗ ರಸ್ತೆ, ಬೆಂಗಳೂರು.
6. ಅಪರ ಆಯುಕ್ತರು, ಸಾರ್ವಜನಿಕ ಶಿಕ್ಷಣ ಇಲಾಖೆ, ಕಲಬುರಗಿ/ಧಾರವಾಡ.
7. ನಿರ್ದೇಶಕರು, ಪದವಿ ಪೂರ್ವ ಶಿಕ್ಷಣ ಇಲಾಖೆ, ಮಲ್ಲೇಶ್ವರಂ, ಬೆಂಗಳೂರು.
8. ನಿರ್ದೇಶಕರು (ಪ್ರಾಥಮಿಕ /ಪ್ರೌಢ ಶಿಕ್ಷಣ), ಸಾರ್ವಜನಿಕ ಶಿಕ್ಷಣ ಇಲಾಖೆ, ಬೆಂಗಳೂರು/ ಕಲಬುರಗಿ/ಧಾರವಾಡ.
9. ರಾಜ್ಯದ ಎಲ್ಲಾ ಉಪ ನಿರ್ದೇಶಕರು(ಆಡಳಿತ) ಮತ್ತು ಕ್ಷೇತ್ರ ಶಿಕ್ಷಣಾಧಿಕಾರಿಗಳು, ಸಾರ್ವಜನಿಕ ಶಿಕ್ಷಣ ಇಲಾಖೆ(ಆಯಾ ಆಯುಕ್ತಾಲಯಗಳ ಮುಖಾಂತರ).

**ಮಾಹಿತಿಗಾಗಿ:**

1. ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಹಾಗೂ ಸಕಾಲ ಸಚಿವರ ಆಪ್ತ ಕಾರ್ಯದರ್ಶಿ.
2. ಸರ್ಕಾರದ ಪ್ರಧಾನ ಕಾರ್ಯದರ್ಶಿ, ಶಾಲಾ ಶಿಕ್ಷಣ ಮತ್ತು ಸಾಕ್ಷರತಾ ಇಲಾಖೆ ರವರ ಆಪ್ತ ಕಾರ್ಯದರ್ಶಿ.

3. ಸರ್ಕಾರದ ಅಪರ ಕಾರ್ಯದರ್ಶಿ(ಆಡಳಿತ/ಸೇವೆಗಳು –1), ಶಾಲಾ ಶಿಕ್ಷಣ ಮತ್ತು ಸಾಕ್ಷರತಾ ಇಲಾಖೆ ರವರ ಆಪ್ತ ಸಹಾಯಕರು.
4. ಸರ್ಕಾರದ ಉಪ ಕಾರ್ಯದರ್ಶಿ(ಸೇವೆಗಳು - 2), ಶಾಲಾ ಶಿಕ್ಷಣ ಮತ್ತು ಸಾಕ್ಷರತಾ ಇಲಾಖೆ ರವರ ಆಪ್ತ ಸಹಾಯಕರು.
5. ಶಾಖಾ ರಕ್ಷಾ ಕಡತ/ಹೆಚ್ಚುವರಿ ಪ್ರತಿ/ಮಾಹಿತಿ ಕೇಂದ್ರ.